ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/09/ಇಸಿಎಸ್(2)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ:29.01.2024

**ಸುತ್ತೋಲೆ**

ವಿಷಯ: ಡಿಸೆಂಬರ್ 2023 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡುವುದು/ಮರು ಮೌಲ್ಯಮಾಪನ ಮಾಡುವ ಕುರಿತು

ಉಲ್ಲೇಖ: 1.ಸರ್ಕಾರದ ಆದೇಶ ಸಂಖ್ಯೆ: ಇಡಿ 330 ಟಿಪಿಇ 2004 ದಿನಾಂಕ: 28-6-2005

2. ದಿನಾಂಕ: 25/07/2023 ರಂದು ಜರುಗಿದ ತಾಂತ್ರಿಕ ಪರೀಕ್ಷಾ ಮಂಡಳಿಯ 184 ನೇ ವಿಶೇಷ ಕೇಂದ್ರ ಸಭೆಯ ನಿರ್ಣಯಗಳು

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದನ್ವಯ 2023 ಡಿಸೆಂಬರ್ ತಿಂಗಳಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ನೀಡಲು ಮತ್ತು ಮರು ಮೌಲ್ಯಮಾಪನ ಮಾಡಲು ನಿರ್ಧರಿಸಲಾಗಿದೆ. ವಿದ್ಯಾರ್ಥಿಗಳು/ಪೋಷಕರು ಸಂಸ್ಥೆಯ ಪ್ರಾಚಾರ್ಯರುಗಳು ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಲಾಗಿದೆ.

**ನಿಯಮ ಮತ್ತು ನಿಬಂಧನೆಗಳು:**

1. ಉತ್ತರ ಪತ್ರಿಕೆಗಳ ಫೋಟೋಪ್ರತಿ ಪಡೆಯಲು ಇಲ್ಲವೇ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಕೋರಿಕೆ ಸಲ್ಲಿಸಬೇಕು. ಅರ್ಜಿಗಳು ಸಂಬಂಧಪಟ್ಟ ಪಾಲಿಟೆಕ್ನಿಕ್‌ಗಳಲ್ಲಿ ಮತ್ತು ಮಂಡಳಿಯಲ್ಲಿ ಲಭ್ಯವಿರುತ್ತದೆ.
2. ಫೋಟೋಪ್ರತಿ/ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ನಿಗಧಿಪಡಿಸಿರುವ ಶುಲ್ಕವನ್ನು K2 ಮುಖಾಂತರ 0202-02-101-0-01 ಲೆಕ್ಕ ಶೀರ್ಷಿಕೆಯಲ್ಲಿ ಪಾವತಿಸಬೇಕು.
3. ಸಂಸ್ಥೆಯ ಪ್ರಾಚಾರ್ಯರು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ವಿವರಗಳನ್ನು ಭರ್ತಿ ಮಾಡಿ, ಪ್ರಾಂಶುಪಾಲರಿಂದ ಮೇಲು ರುಜು ಮಾಡಲ್ಪಟ್ಟ ಅರ್ಜಿಗಳನ್ನು ಅಂಚೆ ಮೂಲಕವಾಗಿ ಅಥವಾ ಖುದ್ದಾಗಿ ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ, ಅರಮನೆ ರಸ್ತೆ, ಬೆಂಗಳೂರು-560 001 ಈ ವಿಳಾಸಕ್ಕೆ ನಿಗದಿಪಡಿಸಿರುವ ಅವಧಿಯೊಳಗೆ ಸಲ್ಲಿಸಬೇಕು.

**ಉತ್ತರ ಪತ್ರಿಕೆಯ ಫೋಟೋ ಪ್ರತಿ ಬಗ್ಗೆ:**

1. ಉತ್ತರ ಪತ್ರಿಕೆಯ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಅವಧಿ: **ದಿನಾಂಕ: 30.01.2024 ರಿಂದ 05.02.2024 ರವರೆಗೆ**
2. ಫೋಟೋ ಪ್ರತಿ ಶುಲ್ಕ, ಪ್ರತಿ ವಿಷಯಕ್ಕೆ ರೂ. 250-00(ಎರಡು ನೂರ ಐವತ್ತು ರೂಪಾಯಿಗಳು)
3. ಉತ್ತರ ಪತ್ರಿಕೆಗಳ ಫೋಟೋ ಪ್ರತಿಯನ್ನು ವಿದ್ಯಾರ್ಥಿಯು ವಿದ್ಯಾಭ್ಯಾಸ ಮಾಡುತ್ತಿರುವ **ಸಂಸ್ಥೆಯ ವಿಳಾಸಕ್ಕೆ ಮಾತ್ರ ಕಳುಹಿಸಲಾಗುವುದು. ವಿದ್ಯಾರ್ಥಿಯ ವೈಯಕ್ತಿಕ ವಿಳಾಸಕ್ಕೆ ಕಳುಹಿಸಲಾಗುವುದಿಲ್ಲ** ಮತ್ತು ಫೋಟೋ ಪ್ರತಿಯನ್ನು ಖುದ್ದಾಗಿ ನೀಡಲಾಗುವುದಿಲ್ಲ. ಈ ಬಗ್ಗೆ ಖುದ್ದಾಗಿ ಮಂಡಳಿಯಲ್ಲಿ ವಿಚಾರಿಸುವ ಅಗತ್ಯವಿರುವುದಿಲ್ಲ.
4. ಪ್ರತಿ ವಿಷಯಕ್ಕೆ ಪ್ರತ್ಯೇಕ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

**ಉತ್ತರ ಪತ್ರಿಕೆಯ ಮರು ಮೌಲ್ಯಮಾಪನದ ಬಗ್ಗೆ:**

1. ಉತ್ತರ ಪತ್ರಿಕೆಯ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಅವಧಿ **ದಿನಾಂಕ: 30.01.2024 ರಿಂದ 05.02.2024 ರವರೆಗೆ**
2. ಮರು ಮೌಲ್ಯಮಾಪನದ ಶುಲ್ಕ, ಪ್ರತಿ ವಿಷಯಕ್ಕೆ ರೂ. 550-00(ಐದು ನೂರ ಐವತ್ತು ರೂಪಾಯಿ ಮಾತ್ರ)
3. ಪ್ರತಿ ವಿಷಯಕ್ಕೆ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವುದು.
4. ಮರು ಮೌಲ್ಯಮಾಪನದ ಫಲಿತಾಂಶವನ್ನು ಮರು ಮೌಲ್ಯಮಾಪನದ ನಂತರ ಸಂಬಂಧಿಸಿದ ಕಾಲೇಜುಗಳಿಗೆ ಆನ್‌ಲೈನಲ್ಲಿ ನಿಗದಿತ ದಿನಾಂಕದಂದು ಕಳುಹಿಸಲಾಗುವುದು ಮತ್ತು BTELinx Web Portal ನಲ್ಲಿ ಕೂಡ ಪ್ರಕಟಿಸಲಾಗುವುದು. ಅಭ್ಯರ್ಥಿಯು ತನ್ನ ಮರು ಮೌಲ್ಯಮಾಪನದ ಫಲಿತಾಂಶವನ್ನು ತನ್ನ ಕಾಲೇಜಿನಲ್ಲಿಯೇ ಪಡೆಯಲು ತಿಳಿಸಲಾಗಿದ್ದು, ಯಾವುದೇ ಕಾರಣಕ್ಕೂ ವಿದ್ಯಾರ್ಥಿಯ ವೈಯಕ್ತಿಕ ವಿಳಾಸಕ್ಕೆ ಕಳುಹಿಸಲಾಗುವುದಿಲ್ಲ.
5. ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಮರು ಮೌಲ್ಯಮಾಪನದ ಫಲಿತಾಂಶಕ್ಕೆ ಕಾಯದೇ ಮುಂಬರುವ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ನಿಗದಿತ ಶುಲ್ಕ ಪಾವತಿಸಿ, ಅರ್ಜಿ ಸಲ್ಲಿಸಲು ತಿಳಿಸಲಾಗಿದೆ.
6. ಮರು ಮೌಲ್ಯಮಾಪನದ ಫಲಿತಾಂಶದ ಬಗ್ಗೆ ಮರು ಮೌಲ್ಯಮಾಪನ ಸಮಿತಿಯವರ ತೀರ್ಮಾನವೇ ಅಂತಿಮ. ಇದರ ಬಗ್ಗೆ ಮಂಡಳಿಯಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶ ಇರುವುದಿಲ್ಲ.

7. ಮರು ಮೌಲ್ಯಮಾಪನದಲ್ಲಿ ವಿದ್ಯಾರ್ಥಿಯು ಗಳಿಸಿದ ಅಂಕಗಳನ್ನು ಪರಿಗಣಿಸಿ ಫಲಿತಾಂಶವನ್ನು ನೀಡಲಾಗುವುದು. ಮುಂದುವರೆದು ಮರು ಮೌಲ್ಯಮಾಪನದಲ್ಲಿ ಗಳಿಸಿದ ಅಂಕಗಳು ಹೆಚ್ಚಾಗಿದ್ದಲ್ಲಿ ಮಾತ್ರ ಪರಿಷ್ಕೃತ ಫಲಿತಾಂಶವನ್ನು ನೀಡಲಾಗುವುದು. ಇಲ್ಲದ ಪಕ್ಷದಲ್ಲಿ ಈ ಹಿಂದೆ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು.

**ಸೂಚನೆಗಳು :**

1) ವಿದ್ಯಾರ್ಥಿಗಳು ತಾವು ಮರುಮೌಲ್ಯಮಾಪನ/ ಫೋಟೊ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ/ ಪ್ರಶ್ನೆಪತ್ರಿಕೆ ಕೋಡ್ ಮಾಹಿತಿಯನ್ನು ಸಂಬಂಧಪಟ್ಟ ಸಂಸ್ಥೆಯ ಪ್ರಿನ್ಸಿಪಾಲರು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಮಂಡಳಿಗೆ ಸಲ್ಲಿಸಿರುವುದನ್ನು ಖಾತರಿಪಡಿಸಿಕೊಳ್ಳಬಹುದಾಗಿದೆ.

2) ಕೆಲವು ವಿದ್ಯಾರ್ಥಿಗಳು ಕೊನೆಯ ದಿನಾಂಕದ ನಂತರ "ಸೇವಾ ಸಿಂಧು" ಅಡಿಯಲ್ಲಿ ಅರ್ಜಿ ಸಲ್ಲಿಸುವುದು ಕಂಡು ಬಂದಿದೆ. ಆದ ಕಾರಣ ಆದರೆ, <u>**ಮರುಮೌಲ್ಯಮಾಪನ/ ಫೋಟೋ ಪ್ರತಿಯನ್ನು ನಿಗದಿತ ಅವಧಿಯೊಳಗೆ ಮಾತ್ರ ನೀಡಲಾಗುತ್ತದೆ.**</u> ನಿಗದಿಪಡಿಸಿರುವ ಅವಧಿಯೊಳಗೆ "ಸೇವಾ ಸಿಂಧು" ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದರೂ ಸಹ BTELinx ವೆಬ್‌ಪೋರ್ಟಲ್‌ನಲ್ಲಿ "ಸೇವಾ ಸಿಂಧು" ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿದ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳು ಸಂಬಂಧಪಟ್ಟ ಪ್ರಿನ್ಸಿಪಾಲರು ಮತ್ತು ತಾಂತ್ರಿಕ ಪರೀಕ್ಷಾ ಮಂಡಳಿಗೆ ನೀಡತಕ್ಕದ್ದು.

3) ವಿದ್ಯಾರ್ಥಿಗಳು ಮರುಮೌಲ್ಯಮಾಪನ/ ಫೋಟೊ ಪ್ರತಿಗಾಗಿ ಈ ಸುತ್ತೋಲೆಯಲ್ಲಿ ನೀಡಲಾಗಿರುವ ಕೊನೆಯ ದಿನಾಂಕದೊಳಗೆ ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಭರ್ತಿ ಮಾಡುವುದು ಕಡ್ಡಾಯವಾಗಿರುತ್ತದೆ.

4) ಪ್ರಿನ್ಸಿಪಾಲರುಗಳು ವಿದ್ಯಾರ್ಥಿಯ ಫೋಟೋ ಪ್ರತಿಯ ಅರ್ಜಿಯನ್ನು/ಮರು ಮೌಲ್ಯಮಾಪನದ ಅರ್ಜಿಗಳನ್ನು ಪರಿಶೀಲಿಸಿ ಎಲ್ಲಾ ಅಗತ್ಯ ಮಾಹಿತಿಗಳನ್ನು (ಉದಾ: ವಿದ್ಯಾರ್ಥಿಯ ಹೆಸರು, ವಿದ್ಯಾರ್ಥಿಯ ನೋಂದಣಿ ಸಂಖ್ಯೆ, ವಿಷಯದ ಹೆಸರು, ಪ್ರಶ್ನೆ ಪತ್ರಿಕೆ ಕೋಡ್ ನಂಬರ್, ಆ ವಿಷಯದಲ್ಲಿ ಗಳಿಸಿರುವ ಅಂಕಗಳು, ಶುಲ್ಕ ಪಾವತಿಸಿರುವ ವಿವರ, ಶುಲ್ಕ ಪಾವತಿಸಿದ ಮೂಲ ಚಲನ್) ನೀಡಲಾಗಿದೆಯೇ ಎಂಬ ಬಗ್ಗೆ ಖಾತರಿ ಪಡಿಸಿಕೊಂಡು ಆನ್‌ಲೈನ್‌ನಲ್ಲಿ ಭರ್ತಿ ಮಾಡಿ Acknowledgement slip ಲಗತ್ತಿಸಿದ ಅರ್ಜಿಗಳಿಗೆ ಮಾತ್ರ ಮೇಲು ರುಜು ಮಾಡಲು ತಿಳಿಸಲಾಗಿದೆ.

5) ಪ್ರಿನ್ಸಿಪಾಲರುಗಳು ವಿದ್ಯಾರ್ಥಿಯ ಫೋಟೋ ಪ್ರತಿಯ ಅರ್ಜಿ/ಮರು ಮೌಲ್ಯಮಾಪನದ ಅರ್ಜಿಯ ವಿವರಗಳನ್ನು ಈಗಾಗಲೇ ಸಂಸ್ಥೆಗಳಲ್ಲಿ ಉಪಯೋಗಿಸುತ್ತಿರುವ ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ ಮೂಲಕ ಆನ್ ಲೈನ್‌ನಲ್ಲಿ ಅರ್ಜಿಯ ಎಲ್ಲಾ ವಿವರಗಳನ್ನು ಭರ್ತಿ ಮಾಡಿದ ನಂತರ ಮಂಡಳಿಗೆ ಕಳುಹಿಸಿಕೊಡಲು ತಿಳಿಸಲಾಗಿದೆ. ಆನ್‌ಲೈನ್ ಮೂಲಕ ವಿವರಗಳನ್ನು ಸಲ್ಲಿಸದೇ, ನೇರವಾಗಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

6) ಸಂಸ್ಥೆಗಳಲ್ಲಿ ಆನ್‌ಲೈನ್ ಮೂಲಕ ಭರ್ತಿ ಮಾಡಲ್ಪಟ್ಟ ಫೋಟೋ ಪ್ರತಿಯ ಅರ್ಜಿಯನ್ನು/ಮರು ಮೌಲ್ಯಮಾಪನದ ಅರ್ಜಿಗಳನ್ನು <u>ದಿನಾಂಕ 07.02.2024 ಸಂಜೆ 5.30</u> ಗಂಟೆಯೊಳಗೆ ಈ ಕಚೇರಿಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆಯ ಮುಖಾಂತರ ಸಲ್ಲಿಸಲು ತಿಳಿಸಲಾಗಿದೆ. ನಂತರ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವುದು.

7) ನಿಗದಿತ ದಿನಾಂಕದ ನಂತರ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಿದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8) ಕಾರ್ಯದರ್ಶಿಯವರ ಸೂಚನೆಗಳನ್ನು/ನಿಯಮಗಳನ್ನು ಪಾಲಿಸದ ಪ್ರಿನ್ಸಿಪಾಲರ ಮೇಲೆ ಸರ್ಕಾರದ ಆದೇಶ ಸಂಖ್ಯೆ: ಇಡಿ 57 ಟಿಪಿಇ 2013 ದಿನಾಂಕ: 17-4-2015ರ ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು.

9) ಪರೀಕ್ಷಾ ವಿಭಾಗಕ್ಕೆ ಸಂಬಂಧಪಟ್ಟಂತೆ ಪರೀಕ್ಷೆಯ ಎಲ್ಲಾ ರೀತಿಯ ಶುಲ್ಕಗಳನ್ನು Khajane-II (K2) ಮುಖಾಂತರವೇ ಕಡ್ಡಾಯವಾಗಿ ಪಾವತಿಸತಕ್ಕದ್ದು.

10) ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಪ್ರತಿಯೊಬ್ಬ ವಿದ್ಯಾರ್ಥಿಯು ಪ್ರತ್ಯೇಕವಾಗಿ ಚಲನ್‌ಗಳನ್ನು ಜನರೇಟ್ ಮಾಡಿಕೊಂಡು Khajane-II ಮುಖಾಂತರವೇ ಪಾವತಿಸತಕ್ಕದ್ದು.

11) ಖಜಾನೆ-2 ಚಲನ್‌ಗಳನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನೊಂದಿಗೆ ಜೋಡಿಸಲಾಗುವುದು. ವಿದ್ಯಾರ್ಥಿಯ ಖಜಾನೆ-2 ಚಲನ್ ಸಂಖ್ಯೆ ಇಲ್ಲದಿದ್ದ ಪಕ್ಷದಲ್ಲಿ ಅಂತಹ ಫೋಟೊಪ್ರತಿ/ಮರುಮೌಲ್ಯಮಾಪನದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

12) K2 ಚಲನ್ ಮುಖಾಂತರ ಪರೀಕ್ಷಾ ಶುಲ್ಕಗಳನ್ನು ಪಾವತಿಸದಿದ್ದಲ್ಲಿ ಆದರಿಂದ ಮುಂದೆ ಉಂಟಾಗುವ ಭಾದಕಗಳಿಗೆ ಸಂಬಂಧಪಟ್ಟ ಸಂಸ್ಥೆಯ ಪ್ರಿನ್ಸಿಪಾಲರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

**ಇವರಿಗೆ,**
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ವಿದ್ಯಾರ್ಥಿ ಸೂಚನಾಫಲಕದಲ್ಲಿ ಪ್ರಕಟಿಸಲು & ತರಗತಿಗಳಲ್ಲಿ ಸುತ್ತೋಲಿಸಲು

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ – ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು 3) ಕಾರ್ಯದರ್ಶಿಯವರು ಆಪ್ತ ಶಾಖೆ